# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಹರೀಶ್ ಕೆ.ಎ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಳಿಕೆ ಗ್ರಾಮ ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ–ಅಂತಿಮ ಆದೇಶ ಹೊರಡಿಸುವ ಬಗ್ಗೆ–ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/ 351/ಗ್ರಾಪಂಕಾ/2016 ದಿನಾಂಕ:27.06.2016.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-2/DE/229/2016/ARE-10 Dt:08.06.2017.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE/229/2016/ARE-10 Dt:21.06.2017.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/552/ಗ್ರಾಪಂಕಾ/2017 ದಿನಾಂಕ:06.07.2017.
5. ಶ್ರೀ ಹರೀಶ್ ಕೆ.ಎ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿ:04.08.2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಹರೀಶ್ ಕೆ.ಎ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಳಿಕೆ ಗ್ರಾಮ ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14–ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಬಂಧಕರು ವಿಚಾರಣೆಗಳು–10, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

That, you DGO Sri Harish K.A, Panchayath Development Officer, Alike Gram Panchayath, Buntwal Taluk, Dakshina Kannada District, failed to take action against Sri.Udaneshwara Bhat who obtained licence for renovation of old house but constructed new house violating the terms and conditions of the licence. Thereby you DGO, being a Government/ Public Servant has failed to maintain absolute integrity besides devotion to duty and acted in a manner unbecoming of a Government servant and thus committed misconduct as enumerated U/R 3(1) of Karnataka Civil Service (Conduct) Rules 1966.

ವಿಚಾರಣಾಧಿಕಾರಿಗಳು ತಮ್ಮ ವರದಿಯಲ್ಲಿ ಶ್ರೀ ಹರೀಶ್ ಕೆ.ಎ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಳಿಕೆ ಗ್ರಾಮ ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ವಿಚಾರಣಾಧಿಕಾರಿಯವರ ವರದಿಯನ್ನು ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಹರೀಶ್ ಕೆ.ಎ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ

ನಿರ್ವಹಿಸುತ್ತಿದ್ದಾಗ, ಶ್ರೀ ಉದನೇಶ್ವರ್ ಭಟ್ ರವರಿಗೆ ಹಳೆ ಮನೆಯ (ದುರಸ್ಥಿ) ಪುನರ್ ರಚನೆಗೆ ನೀಡಿದ ಪರವಾನಿಗೆ ದುರ್ಬಳಕೆ ಮಾಡಿ ಹೊಸ ನಿರ್ಮಾಣ ಮಾಡುವ ಸಂದರ್ಭದಲ್ಲಿ ಸಂಬಂಧಿಸಿದವರಿಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿರವರು ನೋಟೀಸ್ಸ್ ಜಾರಿಗೊಳಿಸಿ ನಿಯಮಾನುಸಾರ ಕ್ರಮ ಕೈಗೊಳ್ಳುವಲ್ಲಿ ವಿಫಲರಾಗಿ ಕರ್ತವ್ಯಲೋಪ ಎಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 8(iii)ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಮುಂದಿನ ಒಂದು ವಾರ್ಷಿಕ ವೇತನ ಬಡ್ತಿಯನ್ನು ಮೂರು ವರ್ಷಗಳ ಅವಧಿಗೆ ಸಂಚಿತ ರಹಿತ ಪರಿಣಾಮದೊಂದಿಗೆ ತಡೆಯಿಡಿಯುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಈ ಸಂಬಂಧ ಶ್ರೀ ಹರೀಶ್ ಕೆ.ಎ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಳಿಕೆ ಗ್ರಾಮ ಪಂಚಾಯಿತಿ, ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ, ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (5) ರಲ್ಲಿ ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ತಮ್ಮ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

ಸದರಿಯವರು 2010 ರಿಂದ ಅಳಿಕೆ ಗ್ರಾಮ ಪಂಚಾಯಿತಿಯಲ್ಲಿ ಸೇವೆ ಸಲ್ಲಿಸುತ್ತಿದ್ದು, ಪ್ರಸ್ತುತ ಬಡಗಬೆನ್ನೂರು ಗ್ರಾಮ ಪಂಚಾಯಿತಿಯಲ್ಲಿ ಸೇವೆ ಸಲ್ಲಿಸಿರುತ್ತಿರುವುದಾಗಿ ತಿಳಿಸಿರುತ್ತಾರೆ. ಅಳಿಕೆ ಗ್ರಾಮ ಪಂಚಾಯಿತಿಯಲ್ಲಿ ಸೇವೆ ಸಲ್ಲಿಸುತ್ತಿದ್ದ ಸಂದರ್ಭದಲ್ಲಿ ಶ್ರೀ ಉದನೇಶ್ವರ ಭಟ್ ಎಂಬುವವರು ದಿನಾಂಕ:29.09.2012 ರಂದು ತಮ್ಮ ಹಕ್ಕಿನ ಮನೆ ನಂಬರ್ 3/75 ಮನೆಯನ್ನು ದುರಸ್ಥಿ ಪಡಿಸಲು ಪರವಾನಿಗಾಗಿ ಅರ್ಜಿ ಸಲ್ಲಿಸಿದ್ದು, ಅದನ್ನು ದಿನಾಂಕ:21.11.2012 ರಂದು ನಡೆದ ಸಾಮಾನ್ಯ ಸಭೆಯಲ್ಲಿ ಮಂಡಿಸಿ. ಸಾಮಾನ್ಯ ಸಭೆಯ ನಿರ್ಣಯ ಸಂಖ್ಯೆ: 102/2012-13 ರಂತೆ ಪರವಾನಿಗೆ ನೀಡಿರುವುದಾಗಿ ಈ ಮೊದಲು ನಿಯಮಾನುಸಾರ ನೋಟೀಸ್ಸು ಬೋರ್ಡ್‌ನಲ್ಲಿ ಪ್ರಚಾರ ಪಡಿಸಿರುವುದಾಗಿ ಈ ಸಂಬಂಧ ಯಾವುದೇ ಆಕ್ಷೇಪಣೆಗಳು ಬಂದಿಲ್ಲದ ಕಾರಣ ಪರವಾನಿಗೆ ನೀಡಿದ್ದಾಗಿ ತಿಳಿಸಿರುತ್ತಾರೆ.

ದಿನಾಂಕ:1008.2014 ರಂದು ಶ್ರೀ ಉದನೇಶ್ವರ ಭಟ್, ಇವರು ಮನೆ ಕಟ್ಟುವ ಕೆಲಸ ಪೂರ್ಣಗೊಳಿಸಿ ವಿದ್ಯುತ್ ಸಂಪರ್ಕಕ್ಕಾಗಿ ನಿರಪೇಕ್ಷಣಾ ಪತ್ರ ನೀಡುವಂತೆ ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸಿದ್ದು, ಈ ಸಂಬಂಧ ಸ್ಥಳ ತನಿಖೆ ನಡೆಸಿದಾಗ ಸದರಿಯವರು ಮನೆ ದುರಸ್ಥಿಗೆ ಪರವಾನಿಗೆ ಪಡೆದು ಹೊಸ ಮನೆ ಕಟ್ಟಿರುವುದು ಕಂಡು ಬಂದ ಕಾರಣ ದಿನಾಂಕ:15.08.2014 ರಂದು ಕಾರಣ ಕೇಳುವ ನೋಟೀಸ್ಸು ನೀಡಿದ್ದಾಗಿ ಪರವಾನಿಗೆ ಷರತ್ತನ್ನು ಉಲ್ಲಂಘಿಸಿದ್ದರಿಂದ ಸದರಿಯವರಿಗೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 298 ರಂತೆ 1000/- ದಂಡನೆಯನ್ನು ವಿಧಿಸಿರುವುದಾಗಿ ತಿಳಿಸಿರುತ್ತಾರೆ.

ದೂರುದಾರರಾದ ಶ್ರೀ ರಾಮಚಂದ್ರ ಬಳ್ಳಾಲ್‌ರವರು ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದು, ಶ್ರೀ ಉದನೇಶ್ವರ್ ಭಟ್, ರವರು ಅಕ್ರಮವಾಗಿ ಮಂಜೂರು ಮಾಡಿಸಿಕೊಂಡಿರುವ ಜಮೀನು ಸರ್ವೆ ನಂ:104/2 ರಲ್ಲಿ ಶ್ರೀ ಉದನೇಶ್ವರ್ ಭಟ್ ರವರು ಹೊಸ ಮನೆ ಕಟ್ಟಿದ್ದು, ಇದಕ್ಕೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿರವರು ಸಹಾಯ ಮಾಡಿರುವುದಾಗಿ ತಿಳಿಸಿರುತ್ತಾರೆ. ಆದರೆ ವಾಸ್ತವವಾಗಿ ಶ್ರೀ ಉದನೇಶ್ವರ್ ಭಟ್ ರವರ ಕ್ರಯಕ್ಕೆ ಪಡೆದ ಈಗಾಗಲೇ ಮನೆ ಇದ್ದ ಸರ್ವೆ ನಂ.104/3ಪಿ1 ರ ಮನೆ ಸಂಖ್ಯೆ:3.75 ಕ್ಕೆ ಪರವಾನಿಗೆ ನೀಡಿರುವುದಾಗಿ ತಿಳಿಸಿರುತ್ತಾರೆ.

ತನಿಖಾಧಿಕಾರಿಯಾದ ತಾಲ್ಲೂಕು ಪಂಚಾಯಿತಿ, ಕಾರ್ಯನಿರ್ವಾಹಕ ಅಧಿಕಾರಿ, ರವರು ತಮ್ಮ ಹೇಳಿಕೆಯಲ್ಲಿ ಭೂ ಪರಿವರ್ತನೆಯಾಗದ ಜಮೀನಿನ ವಿಷಯವು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವುದಿಲ್ಲವೆಂದು ಹೇಳುತ್ತಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ತಪ್ಪು ಮಾಡಿರುವುದಿಲ್ಲವೆಂದು ಹೇಳಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ನಿಯಮಾನುಸಾರ ಕರ್ತವ್ಯ ನಿರ್ವಹಿಸಿದ್ದು, ಎಲ್ಲಾ ಜವಾಬ್ದಾರಿಗಳನ್ನು ನಿಯಮಾನುಸಾರ ನಿರ್ವಹಿಸಿರುವುದಾಗಿ ಪರವಾನಿಗೆ ನೀಡಿದ ಸ್ಥಳವು ವಿವಾಧಿತ ಸ್ಥಳವಾಗಿರುವುದಿಲ್ಲ ಅದನ್ನು ದೂರುದಾರರು ಸಹ ಒಪ್ಪಿಕೊಂಡಿರುವುದಾಗಿ, ಅವರ ಕರ್ತವ್ಯ ನಿರ್ವಹಣೆಯಲ್ಲಿ ಯಾವುದೇ ಲೋಪವಾಗಿರುವುದಿಲ್ಲವೆಂದು, ಅವರ ಹೇಳಿಕೆಯನ್ನು ಪರಿಗಣಿಸಿ ನ್ಯಾಯ ಒದಗಿಸಿಕೊಡಬೇಕೆಂದು ಕೋರಿರುತ್ತಾರೆ.

ಸದರಿ ಆಪಾದಿತರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರ ಹೇಳಿಕೆಯನ್ನು ಒಪ್ಪಲು ಬರುವುದಿಲ್ಲ, ಕಾರಣ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

In the cross examination, DW1 as admitted that the licence was issued to Uddaneshwar Bhat for renovation of the building. He denies that though Uddaneshwar Bhat has constructed a new building on the basis of renovation licence, he has not taken any action.

In the written statement, DGO has stated and also deposed in his evidence that in the General Body Meeting dt. 21.11.2012, it was decided to grant permission and issue licence for the purpose of renovation of the building and the Panchayath has issued the licence for the purpose of renovation the building at Door No. 3/75. The Panchayath has also collected a sum of Rs. 700/- towards the licence fees.

Further DW1 has deposed that thereafter on 10.08.2014, Sri Udaneshewara Bhat has approached the Panchayath to issue No objection Certificate for obtaining Electricity Connection to said Door No.3/75 and in pursurance of the said letter, DGO inspected the spot and came to know that said Udaneshwara Bhat has violated the conditions of the sanctioned plan. Therefore, he issued a notice calling upon him to give the explanation. Sri Udaneshwara Bhat replied to the said notice and accepted the violation. Therefore a fine of Rs. 1000/- was imposed on Sri. Udaneshwara Bhat. On the next breadth, DGO has taken a contention that the property in which the house is constructed by Sri Udaneshwara Bhat is different from the property to which the licence has been granted for the purpose of renovation. Therefore the contention of the DGO that the Panchayath has nothing to do for the construction put up in Sy.No.104/2 cannot be accepted.

The oral and documentary evidence on record clearly reveals that the DGO has failed to take action against Sri. Udaneshwara Bhat who obtained licence for renovation of old house but constructed new house violating the terms and conditions of the licence. Thereby the DGO being a Government/public servant has failed to maintain absolute integrity besides devotion to duty and acted in a manner unbecoming of a Government servant.

ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತಾರೆ.

Considering the findings of the Inquiry Officer anf also to the nature and gravity of the misconduct alleged against the DGO, it is hereby recommended to the Government that, the DGO Shri Harish K.A, Panchayath Development Officer, Alike Gram Panchayath, Bantwal Taluk, Dakshina kannada District, be punished with " withholding of one annual increments for a period of three years without cumulative effect" in exercise of powers under Rule 8(iii) of the Karnataka Civil Service (Classification and Appeal ) Rules, 1957.

ಸರ್ಕಾರವು ಸದರಿ ಪ್ರಕರಣದಲ್ಲಿ ಶ್ರೀ ಹರೀಶ್ ಕೆ.ಎ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಳಿಕೆ ಗ್ರಾಮ ಪಂಚಾಯಿತಿ, ಇವರು 2ನೇ ಕಾರಣ ಕೇಳುವ ನೋಟೀಸ್ಗೆ ಸಲ್ಲಿಸಿರುವ ಲಿಖಿತ ಹೇಳಿಕೆ, ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ

ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಇವರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಆಪಾದಿತರು 2ನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುವುದರಿಂದ, ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಶ್ರೀ ಹರೀಶ್ ಕೆ.ಎ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಳಿಕೆ ಗ್ರಾಮ ಪಂಚಾಯಿತಿ, ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ 8(iii) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಮುಂದಿನ ಒಂದು ವಾರ್ಷಿಕ ವೇತನ ಬಡ್ತಿಯನ್ನು ಮೂರು ವರ್ಷಗಳ ಅವಧಿಗೆ ಸಂಚಿತ ರಹಿತ ಪರಿಣಾಮದೊಂದಿಗೆ ತಡೆಯಿಡಿಯುವಂತೆ ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:552:ಗ್ರಾಪಂಕಾ2017 ಬೆಂಗಳೂರು, ದಿನಾಂಕ-17-10-2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಹರೀಶ್ ಕೆ.ಎ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಳಿಕೆ ಗ್ರಾಮ ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರು ಅಳಿಕೆ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಶ್ರೀ ಉದನೇಶ್ವರ್ ಭಟ್ ರವರಿಗೆ ಹಳೆ ಮನೆಯ (ದುರಸ್ಥಿ) ಪುನರ್ ರಚನೆಗೆ ನೀಡಿದ ಪರವಾನಿಗೆ ದುರ್ಬಳಕೆ ಮಾಡಿ ಹೊಸ ನಿರ್ಮಾಣ ಮಾಡುವ ಸಂದರ್ಭದಲ್ಲಿ ಸಂಬಂಧಿಸಿದವರಿಗೆ ಸದರಿಯವರು ನೋಟೀಸ್ಸು ಜಾರಿಗೊಳಿಸಿ ನಿಯಮಾನುಸಾರ ಕ್ರಮ ಕೈಗೊಳ್ಳುವಲ್ಲಿ ವಿಫಲರಾಗಿ ಕರ್ತವ್ಯಲೋಪ ಎಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 8(iii)ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಮುಂದಿನ ಒಂದು ವಾರ್ಷಿಕ ವೇತನ ಬಡ್ತಿಯನ್ನು ಮೂರು ವರ್ಷಗಳ ಅವಧಿಗೆ ಸಂಚಿತ ರಹಿತ ಪರಿಣಾಮದೊಂದಿಗೆ ತಡೆಯಿಡಿಯುವಂತೆ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

21/X/17

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
6. ಶ್ರೀ ಹರೀಶ್ ಕೆ.ಎ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಳಿಕೆ ಗ್ರಾಮ ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.